1304(1093) ಶ್ರೀ ಹೊನ್ನಾಳ್ಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) : ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಭೂರಹಿತ ಕೃಷಿ ಕಾರ್ಮಿಕರ ಆರ್ಥಿಕ ಸೌಲಭ್ಯ ಪಡೆದಿರುವವರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು);

ಆ) ಭೂರಹಿತ ಕೃಷಿ ಕಾರ್ಮಿಕರಿಗೆ ಸಿಗಬಹುದಾದಂತಹ ಸೌಲಭ್ಯ ನೀಡುವಲ್ಲಿ ಅಧಿಕಾರಿಗಳಿಂದ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಅಂಥಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳಾವುವು?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವರು):

ಅ) ಈ ವಿಷಯವು ಕಾರ್ಮಿಕ ಇಲಾಖೆಗೆ ಸಂಬಂಧಪಟ್ಟಿರುವುದಿಲ್ಲ.

ಆ) ಅದೇ

ಇ) ಅದೇ

1305(1094) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಒಟ್ಟು ಪಶುವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು? (ವ್ಯಂದವಾರು, ಜಿಲ್ಲಾವಾರು ವಿವರ ನೀಡುವುದು)

ಆ) ರಾಜ್ಯದಲ್ಲಿ ಪಶುವೈದ್ಯಾಧಿಕಾರಿಗಳ ಎಷ್ಟು ಹುದ್ದೆಗಳು ಖಾಲಿ ಇವೆ, ಖಾಲಿ ಇದ್ದ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಯಾವ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು?

ಇ) ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ, ಹಾಗಿಲ್ಲವಾದಲ್ಲಿ ಕಾರಣಗಳೇನು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) ರಾಜ್ಯದಲ್ಲಿ ಪಶುಪಾಲನಾ ಇಲಾಖೆಯಲ್ಲಿ ಒಟ್ಟು 2018 ಪಶುವೈದ್ಯಾಧಿಕಾರಿಗಳ ಮಂಜೂರಾದ ಹುದ್ದೆಗಳು ಮತ್ತು 435 ಸಹಾಯಕ ನಿರ್ದೇಶಕರ ಮಂಜೂರಾದ ಹುದ್ದೆಗಳಿವೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಿದೆ.